




# ಪ್ರೀತಿಗೊಂದು ಚಮಚೆ



■ ಅಮಿತಾ ರವಿಕಿರಣ್

'ಪ್ರೀತಿ' ಎಂಬ ಈ ಎರಡೂವರೆ ಅಕ್ಷರದ ಪದವನ್ನು ಕೇಳಿದಾಗ ಮನಸ್ಸು ಉಲ್ಲಸಿತವಾಗುತ್ತದೆ. ಪ್ರೀತಿ ಎಂಬ ಪದ ಒಂದೇ ಆದರೂ, ಹಾಗೆಂದರೇನು? ಎಂಬ ಪ್ರಶ್ನೆಗೆ ಸಿಗುವ ಉತ್ತರ ಲೆಕ್ಕಕ್ಕೆ ಸಿಗದಷ್ಟು. ಮತ್ತು ಸಿಗುವ ಪ್ರತಿ ಉತ್ತರವೂ ಅನನ್ಯ!

ಪ್ರೀತಿ ಎಂದರೆ ಹಾಗಲ್ಲವೇ? ಭಾಷೆಗೆ ನಿಲುಕದ ಭಾವವದು! ಆದರೂ ಪ್ರೀತಿ ಹೆಚ್ಚಬೇಕೆಂದರೆ ಅದು ವ್ಯಕ್ತವಾಗಬೇಕು. ಪ್ರೀತಿಗೆ ಬೀಳುವುದು, ಪ್ರೀತಿಯಲ್ಲಿ ತನ್ನ ತಾನು ಮರೆಯುವುದು, ತನ್ಮಯತೆ, ತಾದ್ಯಾತ್ಮ ಎಷ್ಟು ಮುಖ್ಯವೋ, ಅಷ್ಟೇ ಮುಖ್ಯ ಪ್ರೇಮ ನಿವೇದನೆ!

ಮನುಷ್ಯ ತನ್ನ ಒಲವು ವ್ಯಕ್ತಪಡಿಸಿ ಪ್ರೀತಿಯನ್ನು ಪಡೆಯಲು, ಬೆಳೆಸಲು, ಒಂದು ಬಹು ಸುಂದರ ಉಪಾಯ ಹುಡುಕಿಕೊಂಡಿದ್ದಾನೆ, ಅದೇ ಉಡುಗೊರೆ; ಅದು ಸಂಗೀತ, ಸಾಹಿತ್ಯ, ಮಾತು, ಚಿತ್ರಕಲೆಯ ಮೂಲವಾದರೂ ಸರಿ. ಅಥವಾ ಒಂದು ವಸ್ತು ರೂಪದಲ್ಲಾದರೂ ಸರಿ. ಉಡುಗೊರೆಯ ಮೂಲಕ ತನ್ನಲ್ಲಿ ಮೂಡಿದ ಪ್ರೀತಿಯನ್ನು ತಾನು ಪ್ರೀತಿಸುವ ಜೀವಕ್ಕೆ ತಿಳಿಸಲು ಹವಣಿಸುತ್ತಾನೆ.

**ಪ್ರೇಮಕಥೆಗಳನ್ನು ಹೇಳುವ ಈ ಕಲಾತ್ಮಕ ಚಮಚೆಗಳ 'ಲವ್ ಸ್ಪೂನ್' ಎಂಬ ಕಾಷ್ಠ ಕಲೆ ವೇಲ್ಸ್ ದೇಶದ ಜನಪದ ವೈಶಿಷ್ಟಗಳಲ್ಲಿ ಒಂದಾಗಿ ಗುರುತಿಸಿಕೊಂಡಿದೆ.**




ಈ ಪ್ರೀತಿ ಅಭಿವ್ಯಕ್ತಿಯಲ್ಲಿ ತನ್ನಿಷ್ಟದ ಜೀವಕ್ಕೆ ಉಡುಗೊರೆ ಕೊಟ್ಟು, ತನ್ನ ಪ್ರೀತಿಯನ್ನು ನಿವೇದಿಸಿಕೊಳ್ಳುವ ಬಗೆ ಇಂದು ನಿನ್ನೆಯದಲ್ಲ! ಪುರಾಣ ಕಾಲದಲ್ಲಿ ಪಾರ್ವತಿ ಶಿವನ ಕುರಿತು ತಪಸ್ಸು ಮಾಡುವಾಗ ಆತನನ್ನು ಒಲಿಸಿಕೊಂಡು ಅವನ ಪ್ರೀತಿ ಸಾಂಗತ್ಯದ ಅಭಿಲಾಷಿಯಾಗಿ ಅಪರೂಪದ ಫಲಪುಷ್ಪಗಳನ್ನು ಆತನಿಗೆ ಉಡುಗೊರೆಯಾಗಿ ಸಮರ್ಪಿಸಿದಳಂತೆ! ಅಂತೆಯೇ, ಕೃಷ್ಣ ರಾಧೆಯ ಪ್ರೇಮಕಥೆಯಲ್ಲಿ ಬರುವ ವೈಜಯಂತಿ ಹಾರ ಮತ್ತು ಕೊಳಲು,